ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹಿರೇಕೆರೂರು ತಾಲ್ಲೂಕು ಕೋಡೆ ಗ್ರಾಮದಲ್ಲಿ ಆರಕ್ಷಕ ಠಾಣೆಯ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಆರಕ್ಷಕ ಠಾಣೆಯನ್ನು ತೆರೆಯಲು ಸರ್ಕಾರವು ಪರಿಶೀಲಿಸುತ್ತಿದೆಯೇ ಹಾಗೂ ಠಾಣೆಯನ್ನು ಯಾವಾಗ ತೆರೆಯಲಾಗುವುದು ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ರಾಜ್ಯದ ಪಶುಚಿಕಿತ್ಸಾಲಯಗಳಿಗೆ ಔಷಧಿ ವಿತರಣೆ.

118 (676) ಶ್ರೀ ಟಿ.ಹೆಚ್. ಬನ್ನಿಕೋಡ್ (ಹಿರೇಕೆರೂರು)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) 1992–93ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಪಶುವೈದ್ಯ ಶಾಲೆಗಳಿಗೆ ಔಷಧಿಗಳನ್ನು ಒದಗಿಸಲು ಮೀಸಲಿರಿಸಿದ ಹಣವೆಷ್ಟು;

ಆ) ಮೀಸಲಿರಿಸಿದ ಹಣದಲ್ಲಿ ಈವರೆಗೆ ಖರೀದಿಸಿದ ಔಷಧಿಗಳ ಬೆಲೆ ಎಷ್ಟು ? ಅವುಗಳನ್ನು ಯಾವ ರೀತಿ ವಿತರಿಸಲಾಗಿದೆ;

ಇ) ಔಷಧಿಗಳನ್ನು ಪೂರೈಸಲು ಆಗಿರುವ ವಿಳಂಬಕ್ಕೆ ಕಾರಣಗಳೇನು ಹಾಗೂ ವಿಳಂಬ ತಪ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

ಈ) ಔಷಧಿಗಳಿಗಾಗಿ ಆಯವ್ಯಯದಲ್ಲಿ ಒದಗಿಸಿರುವ ಹಣವು ಅವಶ್ಯಕತೆಗಿಂತ ಕಡಿಮೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ಹೆಚ್ಚಿನ ಹಣವನ್ನು ಒದಗಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೆ ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ರೂ. 2,76,15,000.00

ಆ) ರೂ. 1,60,95,615.00 ಜಿಲ್ಲೆಯ ಪಶುಪಾಲನಾ ಇಲಾಖೆಯ ಉಪ ನಿರ್ದೇಶಕರುಗಳ ಮುಖಾಂತರ ವಿತರಿಸಲಾಗಿದೆ.

ಇ) ಔಷಧಿಗಳನ್ನು ಸಕಾಲದಲ್ಲಿ ಪೂರೈಸಲಾಗಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಹೌದು.

ಹೆಚ್ಚಿನ ಹಣವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದ ನೀರಾವರಿ ಇಲಾಖೆಯಲ್ಲಿರುವ ಇಂಜಿನಿಯರ್‌ಗಳ ಸೇವೆ

119 (6) ಶ್ರೀ. ಕೆ. ಹರ್ಷಕುಮಾರ್ ಗೌಡ (ಚಾಮರಾಜ)